2007

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಮಕೂರು ಜಿಲ್ಲೆ ತಿಪಟೂರು ಪಟ್ಟಣದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಕುರಿತು.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ:ನಅ:98:ಬೆಂರೂಪ್ರಾ: 2004, ದಿನಾಂಕ:12-05-2005
2) ತಿಪಟೂರು ಪುರಸಭೆ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ:ತಿ.ಸ್ಥಯೋಪ್ರಾ/ಮಾ.ಪ್ಲಾ:05/2007-08 ದಿನಾಂಕ:07-06-2007
3) ನಗರ ಯೋಜನಾ ನಿರ್ದೇಶಕರ ಕಛೇರಿಯ ಕಡತ ಸಂಖ್ಯೆ:ನಯೋ(21)/ಉನಿ(ಕೇಂಕಾ)/ಮಯೋಅ/66/ 2007-08ರಲ್ಲಿ ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ ದಿನಾಂಕ:6.8.2007.

ಪ್ರಸ್ತಾವನೆ:

ತುಮಕೂರು ಜಿಲ್ಲೆ, ತಿಪಟೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾನಯೋಜನೆಗೆ ಮೇಲೆ ಓದಲಾದ 1ರ ಆದೇಶದಲ್ಲಿ ತಾತ್ಕಾಲಿಕ ಅನುಮೋದನೆ ನೀಡಿದೆ.

ತಿಪಟೂರು ಪುರಸಭಾ ಯೋಜನಾ ಪ್ರಾಧಿಕಾರವು ಮೇಲೆ ಓದಲಾದ 2ರ ಪತ್ರದಲ್ಲಿ ತಿಪಟೂರು ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ13(1)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆಯ ನಕ್ಷೆಗಳನ್ನು ಮತ್ತು ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ನಿರ್ದೇಶಕರ ಮುಖಾಂತರ ಸಲ್ಲಿಸಲಾಗಿದೆ.

ತಿಪಟೂರು ಪಟ್ಟಣದ ಜನಸಂಖ್ಯೆಯು 2001ರ ಜನಗಣತಿಯಂತೆ 53,043ರಷ್ಟಿದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ 2021ನೇ ಇಸವಿಯ ವೇಳೆಗೆ 1,02,000 ಜನಸಂಖ್ಯೆಯಾಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ವಿಸ್ತೀರ್ಣವು 11.60 ಚ.ಕಿ.ಮೀ. ಹಾಗೂ ಪ್ರಸ್ತಾಪಿತ ನಗರೀಕರಣ ವಿಸ್ತೀರ್ಣವು

ಸುಸ್ಸೆ TP.S. 18/9/07

18/9/07

ನಗರ ಸಭಾ ಕಾರ್ಯಾಲಯ ಸ.ಸಂ. 515 18/9/07

96
20-9-07

9.53 ಚ.ಕಿ.ಮೀ ಇರುತ್ತದೆ. ತಿಪಟೂರು ಪಟ್ಟಣದ ಜನಸಂಖ್ಯೆಯ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಪಥ, ಹವಾಗುಣ, ರಸ್ತೆಗಳ ಹಾಲಿ ಪರಿಚಲನಾ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ, ಯೋಜನಾ ತತ್ವ ಹಾಗೂ ಮಹಾಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ1961ರ ಪ್ರಕರಣ (12)ರನ್ವಯ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಬೆಳವಣಿಗೆಗೆ ವಿವಿಧ ಭೂ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಕಾಯ್ದಿರಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ ಹಾಗೂ ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಿ ವರದಿಯಲ್ಲಿ ಅಳವಡಿಸಿರುವುದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ13(3)ರನ್ವಯ ಅಂತಿಮ ಅನುಮೋದನೆ ನೀಡಲು ಓದಲಾದ 3ರ ಪ್ರಸ್ತಾವನೆಯಲ್ಲಿ ಶಿಫಾರಸ್ಸು ಮಾಡಲಾಗಿದೆ. ಶಿಫಾರಸ್ಸನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂ:ನಅಇ 69 ಬೆಂರೂಪ್ರಾ 2007, ಬೆಂಗಳೂರು,**
**ದಿನಾಂಕ:10-09-2007.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ತುಮಕೂರು ಜಿಲ್ಲೆ, ತಿಪಟೂರು ಪಟ್ಟಣದ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ1961ರ ಪ್ರಕರಣ 13(3)ರನ್ವಯ ಅಂತಿಮ ಅನುಮೋದನೆ ನೀಡಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

([illegible].ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು,
2. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು,
3. ಮುಖ್ಯಾಧಿಕಾರಿ, ಸ್ಥಳೀಯ ಯೋಜನಾ ಪ್ರಾಧಿಕಾರ, ಪುರಸಭೆ, ತಿಪಟೂರು,
4. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ,
5. ಪಾರದ ರಾಜ್ಯ ಪತ್ರ,
6. ಶಾಖಾ ರಕ್ಷಾ ಕಡತ.